# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 161 | Pages. 2 | Date: 30-04-2025, WEDNESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 161 - ಪುಟಗಳು : 2 - 30 ಏಪ್ರಿಲ್ 2025 ಬುಧವಾರ Ph: 8762954248 ದರ : ₹1


# ಮೈತ್ರಿ ಭಂಗ: ಬಿಜೆಪಿ ರಾಜ್ಯಾಧ್ಯಕ್ಷರಿಗೆ ಮುಖಭಂಗ

## ಮೈತ್ರಿ ಮುರಿದ ಬಿಜೆಪಿ ವಿರುದ್ಧ ರೇವಣ್ಣ ಅಸಮಾಧಾನ

## ಚಂದ್ರೇಗೌಡರ ವಿರುದ್ಧ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರಸಭೆ ಅಧ್ಯಕ್ಷರ ವಿರುದ್ಧದ ಅವಿಶ್ವಾಸ ಗೊತ್ತುವಳಿಯಲ್ಲಿ ಮೈತ್ರಿ ಮುರಿದ ಬಿಜೆಪಿ ವಿರುದ್ಧ ಕಿಡಿಕಾರಿರುವ ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಹಾಗೂ ಪ್ರಧಾನಿ ಮೋದಿ ಅವರ ಬಾಂಧವ್ಯದಿಂದ ಒಟ್ಟಿಗಿದ್ದೇವೆ. ಎರಡೂ ಪಕ್ಷದವರು ಒಟ್ಟಾಗಿ ಜಿಲ್ಲೆಯಲ್ಲಿನ ಸಮಸ್ಯೆ ಬಗೆಹರಿಸಬೇಕು ಎಂದು ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಇದ್ದರೆ, ಹಾಸನದಲ್ಲಿ ಮಾತ್ರ ಬಿಜೆಪಿ-ಕಾಂಗ್ರೆಸ್ ಹೊಂದಾಣಿಕೆ ಇದೆ. ಈ ಬಗ್ಗೆ ರಾಜ್ಯ, ರಾಷ್ಟ್ರ ನಾಯಕರು ಗಮನ ಹರಿಸಿ ಏನು ತೀರ್ಮಾನ ಕೈಗೊಳ್ಳುತ್ತಾರೋ ಅದಕ್ಕೆ ನಾನು ಬದ್ಧ. ಬಿಜೆಪಿ ಜೊತೆ ಮೈತ್ರಿ ವಿಚಾರವಾಗಿ ದೇವೇಗೌಡರು, ಮೋದಿ ಅವರ ಸಂಬಂಧ ಚೆನ್ನಾಗಿದೆ. ಕಾಂಗ್ರೆಸ್ ಬೇಡ ಎಂದು ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿದ್ದೇವೆ. ಎಲ್ಲ ನಾಯಕರು ಮೈತ್ರಿ ಇರಲಿ ಎನ್ನುವ ತನಕ ಇರುತ್ತೇವೆ ಎಂದು ಸ್ಪಷ್ಟಪಡಿಸಿದರು.

ನಗರಸಭೆ ಅಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ವಿಚಾರದಲ್ಲಿ ನನಗೆ ಯಾವುದೇ ರೀತಿಯಲ್ಲೂ ಮುಖಭಂಗ ಆಗಿಲ್ಲ. ಆಗಿರುವುದು ಬಿಜೆಪಿ ರಾಜ್ಯಾಧ್ಯಕ್ಷರಿಗೆ, ಜಿಲ್ಲೆಯಲ್ಲಿ ಬಿಜೆಪಿಯನ್ನು ಕಾಂಗ್ರೆಸ್‌ಗೆ ಅಡ ಇಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅವಿಶ್ವಾಸ ಪರ ಜೆಡಿಎಸ್ ಸದಸ್ಯರು ಮತ ಹಾಕಿದ್ದಾರೆ. ಅವರಿಗೆ ಧನ್ಯವಾದ ಹೇಳುವೆ, ಅಧ್ಯಕ್ಷರ ವಿರುದ್ಧ ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ಮಾಡುತ್ತೇವೆ ಎಂದರು.



### ಏಕವಚನದಲ್ಲಿ ವಾಗ್ದಾಳಿ

ನಗರಸಭೆ ಅಧ್ಯಕ್ಷ ಎಂ. ಚಂದ್ರೇಗೌಡ ವಿರುದ್ಧ ಏಕವಚನದಲ್ಲಿ ಹರಿಹಾಯ್ದ ಅವರು, ಅದೆಷ್ಟು ದಿನ ಇರ್ತಾನೆ ಇರಲಿ, ನಗರಸಭೆಯಲ್ಲಿ ಅಧ್ಯಕ್ಷರು, ಕಾಂಗ್ರೆಸ್-ಬಿಜೆಪಿ ಇವರು ಮೂರೂ ಜನ ಸೇರಿ ಏನ್ ಕಡಿದು ಕಟ್ಟೆ ಹಾಕ್ತಾರೆ ನೋಡೋಣ. ನಮ್ಮ ಪಕ್ಷದ ಎಲ್ಲ ಸದಸ್ಯರಿಗೆ ಕೃತಜ್ಞತೆಗಳು. ಅವರ ಜೊತೆ ನಾನು ಇರ್ತೇನೆ. ಎರಡೂ ರಾಷ್ಟ್ರೀಯ ಪಕ್ಷಗಳಿಗೆ ನಾನು ಹೆದರಲ್ಲ. ಇದನ್ನು ಜಿಲ್ಲೆಯ ಜನರಿಗೆ ಬಿಡುವೆ ಎಂದು ಗುಡುಗಿದರು.

### ಅನುದಾನ ಇಲ್ಲದೆ ತೊಂದರೆ

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ದಿನದಿಂದ ಜಿಲ್ಲಾ ಪಂಚಾಯಿತಿ ಸೇರಿ ಯಾವ ಕಚೇರಿಯಲ್ಲೂ ಕೆಲಸಗಳಾಗುತ್ತಿಲ್ಲ. ಯಾವ ಯಾವ ಕಚೇರಿಯಲ್ಲಿ ಏನೆಲ್ಲ ಕೆಲಸ ಆಗುತ್ತಿದೆ ಎಂಬುದು ನನಗೆ ಗೊತ್ತಿದೆ. ಜಿಪಂಗೆ ಅನುದಾನ ಬಂದು 6 ತಿಂಗಳಾದರೂ ಕೊಡುತ್ತಿಲ್ಲ. ಸರಿಯಾಗಿ ಹಣ ಕೊಡುವುದಾದರೇ ಕೊಡಿ, ಇಲ್ಲದಿದ್ದರೆ ಮುಂದೆ ಕಾನೂನು ರೀತಿ ಏನು ಮಾಡಬೇಕು ಮಾಡುತ್ತೇವೆ ಎಂದರು.

ಪ್ರವೇಶಾತಿ ಆರಂಭವಾಗಿದ್ದರೂ ಸರ್ಕಾರಿ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯ ಇಲ್ಲ. ಡೆಸ್ಕ್, ಕಂಪ್ಯೂಟರ್, ಬೋಧಕರು ಮೊದಲೇ ಇಲ್ಲ. ಹೀಗಾದರೇ ವಿದ್ಯಾರ್ಥಿಗಳ ಗತಿ ಏನು ಎಂದು ಪ್ರಶ್ನಿಸಿದರು.

ನೇಮಕಾತಿ ಮಾಡದೆ ಕೆಲ ಕಾಲೇಜುಗಳಲ್ಲಿ ಪ್ರಾಂಶುಪಾಲರೇ ಕಸ ಗುಡಿಸುತ್ತಿದ್ದಾರೆ. ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುತ್ತಿಲ್ಲ. ಇದನ್ನು ನೋಡಿದರೆ ಸರ್ಕಾರ ಖಾಸಗಿಯವರ ಜೊತೆ ಶಾಮೀಲಾಗಿದೆಯೇ ಎಂಬ ಅನುಮಾನ ಮೂಡಿದೆ ಎಂದು ದೂರಿದರು.

ಅಧಿಕಾರಿಗಳು, ಮಂತ್ರಿಗಳು, ಸಚಿವರು ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಇದೇ ನಿರ್ಲಕ್ಷ್ಯ ಮುಂದುವರಿದರೆ ಸರ್ಕಾರಿ ಕಾಲೇಜುಗಳನ್ನು ಮುಚ್ಚುವ ಸನ್ನಿವೇಶ ಬರಬಹುದು ಎಂದು ಭವಿಷ್ಯ ನುಡಿದರು.

ಇದೇ ವೇಳೆ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಹಿಂದೂಗಳ ನರಮೇಧ ಪ್ರಕರಣವನ್ನು ಖಂಡಿಸಿದ ರೇವಣ್ಣ, ಎಲ್ಲಾ ಧರ್ಮವನ್ನು ಸಮನಾಗಿ ನೋಡಬೇಕು. ಅಲ್ಲಿ ಯಾರೋ ಏನೋ ಮಾಡಿದರೆ ಇಲ್ಲಿರುವ ಮುಸ್ಲಿಂರು ಏನು ಮಾಡ್ತಾರೆ ಎಂದರು.

ಅವಿಶ್ವಾಸ ನಿರ್ಣಯವನ್ನು ಯಾವ ಉದ್ದೇಶಕ್ಕಾಗಿ ತಂದಿದ್ದೆವು ಎಂಬುದು ಎಲ್ಲರಿಗೂ ಗೊತ್ತು. ಶಾಸಕರು ಸೇರಿ ಎಲ್ಲ ಕುಳಿತು ಚರ್ಚಿಸಿ ತೀರ್ಮಾನ ಮಾಡಿದ್ದೆವು. ಈಗಿನ ಅಧ್ಯಕ್ಷರು ನನಗೆ ಮೂರೇ ತಿಂಗಳು ಸಾಕು, ಮೊದಲ ಅವಧಿಗೆ ಕೊಡಿ ಎಂದಿದ್ದರು. ಇಲ್ಲ ಎಂದರೆ ಹಾಸನಾಂಬೆ ಎದುರು ಆಣೆ ಮಾಡಲಿ, 6 ತಿಂಗಳು ಕಳೆದರೂ ಅಧಿಕಾರ ಬಿಡಲಿಲ್ಲ. ನಾವು ಮುಸಲ್ಮಾನ್ ಸದಸ್ಯರಿಗೆ ಅವಕಾಶ ಕೊಡಲು ನಿರ್ಧರಿಸಿದ್ದೆವು ಎಂದರು.


ಅವಿಶ್ವಾಸ ವಿಷಯದ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷರಿಗೆ ತಿಳಿಸಿದ್ದೆ. ಅವರು ವೀಕ್ಷರನ್ನು ಕಳಿಸುವುದಾಗಿ ತಿಳಿಸಿದ್ದರು. ಆದರೆ ಕಾಂಗ್ರೆಸ್-ಬಿಜೆಪಿ ಒಟ್ಟಾಗಿ ನಡೆದುಕೊಂಡಿವೆ. ಹೀಗಾಗಿ ಮುಖಭಂಗ ಆಗಿರುವುದು ಅವರಿಗೆ ಎಂದು ಪುನರುಚ್ಚರಿಸಿದರು.

ಹಿಂದೆ ಬಿಜೆಪಿಯಿಂದ ಗೆದ್ದಿದ್ದ ಸದಸ್ಯೆಯನ್ನು ಉಪಾಧ್ಯಕ್ಷರನ್ನಾಗಿ ಮಾಡಿದ್ದೆವು. ಕಳೆದ 1 ವರ್ಷದಿಂದ ಜಿಲ್ಲೆಯಲ್ಲಿ ಏನೇನು ನಡೆಯುತ್ತಿದೆ ಎಂಬುದು ಬಿಜೆಪಿ ರಾಜ್ಯಾಧ್ಯಕ್ಷರಿಗೆ ಗೊತ್ತಾಗಬೇಕು. ಇಲ್ಲಿ ಎರಡೂ ರಾಷ್ಟ್ರೀಯ ಪಕ್ಷಗಳು ಸೇರಿ ಪ್ರಾದೇಶಿಕ ಪಕ್ಷ ಜೆಡಿಎಸ್ ಮೇಲೆ ಸವಾಲು ಒಡ್ಡಿದ್ದಾರೆ. ಅದನ್ನು ನಾವು ಸ್ವೀಕರಿಸುತ್ತೇವೆ. ಜಿಲ್ಲೆಯಲ್ಲಿ ಬಿಜೆಪಿಯನ್ನು ಕಾಂಗ್ರೆಸ್‌ಗೆ ಅಡ ಇಟ್ಟಿದ್ದಾರೆ ಎಂದು ಲೇವಡಿ ಮಾಡಿದರು.

## ಕಾಡಾನೆ ಸ್ಥಳಾಂತರಕ್ಕೆ ಮನವಿ

ಸಕಲೇಶಪುರ : ಜಿಲ್ಲೆಯ ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆ ಉಪಟಳ ನಿಯಂತ್ರಣಕ್ಕಾಗಿ ಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆಯನ್ನು ಹಾಸನದಲ್ಲಿ ನಡೆಸಬೇಕು. ಉಪಟಳ ನೀಡುತ್ತಿರುವ ಆನೆಗಳ ಸ್ಥಳಾಂತರಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಅವರು ಅರಣ್ಯ ಸಚಿವ ಈಶ್ವರ್ ಖಂಡ್ರೆಗೆ ಮನವಿ ಮಾಡಿದರು.

ಬೆಂಗಳೂರಿನಲ್ಲಿ ಸಚಿವರನ್ನು ಭೇಟಿಯಾದ ಅವರು, ಆಲೂರು, ಸಕಲೇಶಪುರ, ಬೇಲೂರು ತಾಲ್ಲೂಕಿನಲ್ಲಿ ಕಾಡಾನೆಗಳ ಹಾವಳಿಯಿಂದ ಪ್ರಾಣ ಹಾನಿ ಸಂಭವಿಸುತ್ತಿವೆ. ಎಲ್ಲಾ ಕಾಡಾನೆಗಳನ್ನು ಕೂಡಲೇ ಸ್ಥಳಾಂತರಗೊಳಿಸಬೇಕು. ಕಾಡಾನೆ ಹಾವಳಿಯಿಂದ ಸುಮಾರು 80 ಜನರು ಪ್ರಾಣ ತೆತ್ತಿದ್ದಾರೆ. ಕೋಟ್ಯಾಂತರ ರೂ. ಬೆಲೆ ಬಾಳುವ ಕೃಷಿ, ಕಾಫಿ ಬೆಳೆ ನಾಶವಾಗಿದೆ. ಇತ್ತೀಚೆಗೆ ದಿನದಿಂದ ದಿನಕ್ಕೆ ಕಾಡಾನೆಗಳ ಹಾವಳಿ ವಿಪರೀತವಾಗುತ್ತಿರುವುದರಿಂದ ಜನಸಾಮಾನ್ಯರು ಮನೆಯಿಂದ ಹೊರಬರಲು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಭಯಭೀತರಾಗಿದ್ದಾರೆ ಎಂದರು. ವಿದ್ಯಾರ್ಥಿಗಳು ಪ್ರಾಣ ಭಯದಿಂದ ಶಾಲಾ ಕಾಲೇಜಿಗೆ ಹೋಗಲು ಹಿಂದೇಟು ಹಾಕುತ್ತಿದ್ದಾರೆ. ಕಾಡಾನೆ-ಮಾನವ ಸಂಘರ್ಷ ತಡೆಯುವುದು ತುರ್ತು ಅಗತ್ಯವಾಗಿದೆ. ಹಾಸನದಲ್ಲಿ ಮಹತ್ವದ ಸಭೆ ನಡೆಸಬೇಕು ಎಂದು ಕೋರಿದರು. ಹಾಸನದಲ್ಲಿ ಸಭೆ ನಡೆಸುವ ಕುರಿತು ಮುಖ್ಯಮಂತ್ರಿ ಜೊತೆಗೆ ಚರ್ಚಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

## ಆತಂಕ ಹುಟ್ಟಿಸಿದ ಪಹಲ್ಗಾಮ್ ಹತ್ಯಾಕಾಂಡ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಪ್ರವಾಸಿಗರ ಹತ್ಯೆ ಆಘಾತವನ್ನುಂಟು ಮಾಡಿದೆ ಎಂದು ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತ ಡಾ. ವೈ.ಎಸ್. ವೀರಭದ್ರಪ್ಪ ಹೇಳಿದರು.

ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಸಂಸ್ಥೆ, ಗ್ಯಾರಳ್ಳಿ ತಮ್ಮಯ್ಯ ವರ್ಲ್ಡ್ ಅಕಾಡೆಮಿ ವತಿಯಿಂದ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿ, ಇನ್ನೊಬ್ಬರನ್ನು ಕೊಂದು ಬದುಕುವ ಧರ್ಮ ಯಾವುದು ಇಲ್ಲವೆಂದು ರಾಷ್ಟ್ರಕವಿ ಕುವೆಂಪು ಹೇಳಿದ್ದಾರೆ. ನರಮೇಧದಿಂದ ಮಹತ್ತರವಾದುದನ್ನು ಸಾಧಿಸುತ್ತೇವೆ ಎನ್ನುವುದು ಕೇವಲ ಕಲ್ಪನೆ. ಮುಂದಿನ ದಿನಗಳಲ್ಲಿ ಇಂತಹ ಕ್ರೂರ ಘಟನೆಗಳು ಮರುಕಳಿಸದಂತೆ ಎಚ್ಚರ ವಹಿಸಬೇಕು ಎಂದು ಹೇಳಿದರು.

ಗ್ಯಾರಳ್ಳಿ ವರ್ಲ್ಡ್ ಅಕಾಡೆಮಿ ಪ್ರಾಂಶುಪಾಲ ಸೂರ್ಯಕಾಂತ್ ನಾಯರ್ ಮಾತನಾಡಿ, ಜನನಿ ಜನ್ಮ ಭೂಮಿ ಸ್ವರ್ಗಾದಪಿ ಗರೀಯಸಿ ಎಂಬಂತೆ ಜನ್ಮ ಭೂಮಿಗೆ ತೊಡಕಾಗುವ ಸನ್ನಿವೇಶಗಳು ಎದುರಾದಾಗ ನಾವೆಲ್ಲರೂ ಒಂದಾಗಿ ರಕ್ಷಣೆಗೆ ಮುಂದಾಗಬೇಕು. ಎಲ್ಲರೂ ಒಂದೇ ಎಂಬ ಭಾವನೆ ಪ್ರಜೆಗಳಲ್ಲಿ ಮೂಡಬೇಕು ಎಂದರು.

ಸ್ಕೌಟ್ಸ್ ಅಂಡ್ ಗೈಡ್ಸ್ ತಾಲ್ಲೂಕು ಕಾರ್ಯದರ್ಶಿ ಬಿ.ಎಸ್. ವನಜಾಕ್ಷಿ ಮಾತನಾಡಿ, ಪರಸ್ಪರ ಸಹೋದರತ್ವ ಭಾವ ಬೆಳೆದರಷ್ಟೇ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕಬಹುದು. ಧರ್ಮದ ಹೆಸರಿನಲ್ಲಿ ಮನುಷ್ಯರ ಕೊಲ್ಲುವುದು ಸರಿಯಲ್ಲ ಎಂದರು. ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಸಂಘಟನಾ ಆಯುಕ್ತೆ ಹೆಚ್.ಎಂ. ಪ್ರಿಯಾಂಕ, ಶಿಕ್ಷಕಿ ಅರ್ಷಿಯ, ತಿಮ್ಮರಾಜು, ತನುಶ್ರೀ, ಶೋಭಾ, ಪ್ರಜ್ವಲ್, ಯೋಗೀಶ್ ಇತರರಿದ್ದರು.

## ಅಲೆಮಾರಿಗಳ ನಿರ್ಲಕ್ಷಿಸಿದರೆ ಕ್ರಮ: ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಅಲೆಮಾರಿ ಸಮುದಾಯವನ್ನು ನಿರ್ಲಕ್ಷಿಸಿದರೆ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಸ್‌ಸಿ, ಎಸ್ಟಿ ಅಲೆಮಾರಿ ನಿಗಮದ ರಾಜ್ಯಾಧ್ಯಕ್ಷೆ ಜಿ. ಪಲ್ಲವಿ ಎಚ್ಚರಿಕೆ ನೀಡಿದರು.

ತಾಲ್ಲೂಕಿನ ಅಲೆಮಾರಿ ತಾಂಡಾಗೆ ಮಂಗಳವಾರ ಭೇಟಿ ನೀಡಿದ ಅವರು ತಹಶೀಲ್ದಾರ್ ವೈ.ಎಂ. ರೇಣುಕುಮಾರ್ ವಿರುದ್ಧ ಹರಿಹಾಯ್ದರು. ಜನಾಂಗದವರು ವಾಸಿಸುವ ತಾಂಡಾಗಳಲ್ಲಿ ತಾಂಡವವಾಡುತ್ತಿದ್ದ ಅನೈರ್ಮಲ್ಯ ಕಂಡು ಅವರು ತಾಲ್ಲೂಕು ಆಡಳಿತ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಅವರು, ಭೇಟಿ ವಿಚಾರ ಮೊದಲೇ ತಿಳಿಸಿದ್ದರೂ ಸ್ವಚ್ಛತಾ ಕ್ರಮ ಕೈಗೊಳ್ಳದೆ ನಾನು ಬಂದ ಮೇಲೆ ಜೆಸಿಬಿ ಕರೆಸಿದ್ದೀರಿ. ಚರಂಡಿಗಳೆಲ್ಲ ಗಬ್ಬು ನಾರುತ್ತಿವೆ. 16 ಗುಡಿಸಲು ಹಾಗೂ ಜೋಪಡಿಗಳಲ್ಲಿ ಅಲೆಮಾರಿಗಳು ಬದುಕುತ್ತಿದ್ದಾರೆ. ಇವರಿಗೆ ಕನಿಷ್ಠ ಸೌಕರ್ಯ ಕಲ್ಪಿಸಬೇಕೆಂಬ ಪರಿಜ್ಞಾನ ಇಲ್ಲವೇ ಎಂದು ತರಾಟೆಗೆ



ತೆಗೆದುಕೊಂಡರು.

ಅಲೆಮಾರಿಗಳಿಗೆ 2021ರಲ್ಲೇ ನಿವೇಶನ ಮಂಜೂರು ಮಾಡಿಲಾಗಿದೆ. ಆದರೆ ಈ ವರೆಗೆ ಹಕ್ಕುಪತ್ರ ನೀಡಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಅಲೆಮಾರಿಗಳು ಬದುಕಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಸರ್ಕಾರಿ ಜಾಗ ಇಲ್ಲದಿದ್ದರೆ ಖಾಸಗಿ ನಿವೇಶನ ಖರೀದಿಸಿ ಹಂಚಿಕೆ ಮಾಡಬೇಕೆಂಬ ನಿಯಮ ಇದೆ. ಇಲ್ಲಿ ಅಧಿಕಾರಿಗಳು ತಪ್ಪೆಸಗಿರುವುದು ಕಂಡುಬಂದಿದ್ದು ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸರ್ಕಾರ ಕಳೆದ ಸಾಲಿನಲ್ಲಿ ಪರಿಶಿಷ್ಟ ಜಾತಿ ಅಲೆಮಾರಿ ಜನಾಂಗಕ್ಕೆ 35 ಕೋಟಿ ರೂ., ಪರಿಶಿಷ್ಟ ಪಂಗಡಕ್ಕೆ 40 ಕೋಟಿ ರೂ. ಬಿಡುಗಡೆ ಮಾಡಿದೆ. ಪ್ರಸಕ್ತ ಸಾಲಿನಲ್ಲೂ ಹೆಚ್ಚಿನ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಆದರೆ ಅಧಿಕಾರಿಗಳು ನಿರೀಕ್ಷಿತ ಮಟ್ಟದಲ್ಲಿ ಕೆಲಸ ಮಾಡುತ್ತಿಲ್ಲ. ಜಿಲ್ಲೆಗೆ 58 ಲಕ್ಷ ರೂ. ಅನುದಾನ ನಿಗದಿಪಡಿಸಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಬಡಕುಟುಂಬಗಳು ತೊಂದರೆ ಅನುಭವಿಸುವಂತಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕೃಷ್ಣಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಲಿಂಗೇಗೌಡ, ಆರಕ್ಷಕ ವೃತ್ತ ನಿರೀಕ್ಷಕ ಪ್ರದೀಪ್, ನಗರ ಠಾಣೆ ಪಿಎಸ್‌ಐ ಅಭಿಜಿತ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ. ಲಕ್ಷ್ಮಣ್ ಹಾಜರಿದ್ದರು.

## ಎಎನ್‌ಎಂ ತರಬೇತಿ ಮುಂದುವರೆಸಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಕೇಂದ್ರಗಳ ಎಎನ್‌ಎಂ ತರಬೇತಿ ರದ್ದುಗೊಳಿಸುವ ನಿರ್ಧಾರವನ್ನು ಹಿಂಪಡೆಯಬೇಕೆಂದು ಒತ್ತಾಯಿಸಿ ಜಿಲ್ಲಾ ಜನಪರ ಚಳವಳಿಗಳ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.




ಸಾಹಿತಿ ರೂಪ ಹಾಸನ ಮಾತನಾಡಿ, ಹಲವು ವರ್ಷಗಳಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು, 2 ವರ್ಷಗಳ ಕಾಲ ಎಎನ್‌ಎಂ ತರಬೇತಿ ಪಡೆದು, ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ನೇಮಕಗೊಂಡು ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಗ್ರಾಮೀಣ ಆರೋಗ್ಯ ಸೇವೆಯಲ್ಲಿ ಆರೋಗ್ಯ ಸಹಾಯಕಿಯರ ಪಾತ್ರ ಮಹತ್ವದಾಗಿದೆ. ಎಎನ್‌ಎಂ ತರಬೇತಿ ಪಡೆದವರು ದಶಕಗಳಿಂದಲೂ ಗ್ರಾಮಗಳಲ್ಲಿ ವೈದ್ಯರಂತೆಯೇ ಪ್ರಾಥಮಿಕ ಚಿಕಿತ್ಸೆ, ಆರೋಗ್ಯ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ. ಆದರೀಗ 2024-25ನೇ ಸಾಲಿನಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ತರಬೇತಿಗೆ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿನಿರಿಗೆ ಎ.ಎನ್.ಎಂ ತರಬೇತಿ ನೀಡುವುದಿಲ್ಲ ಎನ್ನುತ್ತಿರುವುದು ಸರಿಯಲ್ಲ ಎಂದರು. ರಾಜ್ಯದ 18 ತರಬೇತಿ ಕೇಂದ್ರಗಳಿಗೆ ಈ ವಿದ್ಯಾರ್ಥಿನಿಯರು ಸೇರ್ಪಡೆಗೊಳ್ಳಬಹುದುದೆಂದು ಅಧಿಕೃತ ಜ್ಞಾಪನಾ ಪತ್ರ ಹೊರಡಿಸಲಾಗಿದೆ. 2 ವರ್ಷಗಳ ಕೋರ್ಸ್‌ಗೆ ಜನವರಿಯಲ್ಲೇ ಪ್ರವೇಶ ಪಡೆದು, ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿನಿಯರು, ಇದೇ ತಿಂಗಳ 28ರಿಂದ ಆಂತರಿಕ ಪರೀಕ್ಷೆಗೆ ಸಿದ್ಧತೆ ನಡೆಸಿದ್ದರು. ಆದರೆ ತರಬೇತಿಯನ್ನು ಅರ್ಧಕ್ಕೆ ಮೊಟಕುಗೊಳಿಸಿ, ಕೇಂದ್ರಗಳನ್ನೇ ಮುಚ್ಚಲು ಆರೋಗ್ಯ ಇಲಾಖೆ ಆದೇಶ ಹೊರಡಿಸಿರುವುದನ್ನು ವಿರೋಧಿಸಿದರು.

ಸರ್ಕಾರದ ಈ ನಿಲುವಿನಿಂದಾಗಿ ಎ.ಎನ್.ಎಂ. ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಯರಿಗೆ ಸರ್ಕಾರವೇ ವಂಚನೆ ಮಾಡಿದಂತಾಗಿದೆ.

ಅವರ ಶಿಕ್ಷಣ ಮತ್ತು ಉದ್ಯೋಗವಕಾಶ ಕಸಿದುಕೊಳ್ಳುವ ಕ್ರಮವಾಗಿದೆ ಎಂದು ಆತಂಕ ಹೊರ ಹಾಕಿದರು.

ಸರ್ಕಾರದ ಈ ಕ್ರಮದಿಂದಾಗಿ ಎಲ್ಲರ ಭವಿಷ್ಯ ಮತ್ತು ಬದುಕು ಅತಂತ್ರವಾಗುತ್ತದೆ. ಹಾಸನದಲ್ಲಿ 19 ಮಂದಿ ಸೇರಿ ರಾಜ್ಯಾದ್ಯಂತ 580 ವಿದ್ಯಾರ್ಥಿಗಳಿಗೆ ಅವಕಾಶ ನಿರಾಕರಿಸಲಾಗಿದೆ. ಈ ನಿಲುವು ಬದಲಾಗಬೇಕು ಎಂದು ಒತ್ತಾಯಿಸಿದರು. ಆರೋಗ್ಯ ಕುಟುಂಬ ಮತ್ತು ಕಲ್ಯಾಣ ಸಂಸ್ಥೆ ಎ.ಎನ್.ಎಂ ತರಬೇತಿ ರದ್ದುಗೊಳಿಸುವ ಆದೇಶವನ್ನು ತಕ್ಷಣದಲ್ಲೇ ಹಿಂಪಡೆಯಬೇಕು. ಯಾರಿಗೂ ತೊಂದರೆ ಆಗಬಾರದು. ಎಲ್ಲರಿಗೂ ಉದ್ಯೋಗಾವಕಾಶ ಸಿಗುವಂತೆ ನೇಮಕಾತಿ ಮಾಡಿಕೊಳ್ಳಬೇಕೆಂಬುದು ಜಿಲ್ಲಾ ಜನಪರ ಚಳುವಳಿಗಳ ಒಕ್ಕೂಟದ ಮನವಿ ಎಂದರು. ಪ್ರತಿಭಟನೆಯಲ್ಲಿ ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಟಿ.ಆರ್. ವಿಜಯ್ ಕುಮಾರ್, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್ ಕುಮಾರ್, ಡಿವೈಎಫ್‌ಐ ಜಿಲ್ಲಾ ಕಾರ್ಯದರ್ಶಿ ಎಂ.ಜಿ. ಪೃಥ್ವಿ, ಎಸ್‌ಎಫ್‌ಐ ಜಿಲ್ಲಾ ಕಾರ್ಯದರ್ಶಿ ರಮೇಶ್, ದಸಂಸ ಹಿರಿಯ ಮುಖಂಡ ಕೃಷ್ಣದಾಸ್, ರವಿ ಬಸವಾಪುರ ಇತರರಿದ್ದರು.

## ತಾಪಂ ನೌಕರ ಅನುಮಾನಾಸ್ಪದ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹೊಳೆನರಸೀಪುರ ತಾಲ್ಲೂಕು ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ನೌಕರ ಅನುಮಾನಾಸ್ಪದವಾಗಿ ಮೃತಪಟ್ಟಿದ್ದು, ಆತನ ಪತ್ನಿ ಕುಟುಂಬಸ್ಥರು ಕೊಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಹೊಳೆನರಸೀಪರ ತಾಲ್ಲೂಕಿನ ಮಲ್ಲೇನಹಳ್ಳಿಯ ಎಂ.ಜಿ. ಸತೀಶ್ (43)ಮೃತ. 13 ವರ್ಷಗಳ ಹಿಂದ ವಿದ್ಯಾ ಎಂಬುವರನ್ನು ಮದುವೆಯಾಗಿ ಹಾಸನದ ಚನ್ನಪಟ್ಟಣದಲ್ಲಿ ಬಾಡಿಗೆ ಮನೆ ಮಾಡಿಕೊಂಡು ವಾಸವಾಗಿದ್ದರು. ಈ ನಡುವೆ ಗಂಡ-ಹೆಂಡತಿ ಪದೇ ಪದೆ ಜಗಳ ಮಾಡಿಕೊಳ್ಳುತ್ತಿದ್ದರು. ಈ ಸಂಬಂಧ ಕುಟುಂಬದವರೆಲ್ಲಾ ಸೇರಿ ಹಲವಾರು



ಬಾರಿ ರಾಜಿ ಪಂಚಾಯ್ತಿ ಮಾಡಿದ್ದರೂ ಸಹ ಸಂಸಾರ ಸರಿಯಾಗಿರಲಿಲ್ಲ.

ಈ ನಡುವೆ ವಿದ್ಯಾ ಅವರ ತಂದೆ, ತಾಯಿ, ತಮ್ಮ ಹಾಗೂ ಅವರ ಕಡೆಯವರು ಸೇರಿ ಅನೇಕ ಸತೀಶ್ ಮೇಲೆ ಹಲ್ಲೆ ನಡೆಸಿದ್ದರು ಎನ್ನಲಾಗಿದೆ. ಏ.28 ರಂದು ಬೆಳಿಗ್ಗೆ 9.15 ರ ಸುಮಾರಿನಲ್ಲಿ ಸತೀಶ್ ಅವರ ಚಿಕ್ಕಪ್ಪನ ಮಗ ಕಿರಣ್ ಕುಮಾರ್ ಎಂಬುವರಿಗೆ ಕರೆ ಮಾಡಿ ನಿಮ್ಮ ಅಣ್ಣನ ಆರೋಗ್ಯ ಸರಿಯಿಲ್ಲ. ಅವರನ್ನು ಹಾಸನದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಚಿಕಿತ್ಸೆ ಗೆ ದಾಖಲಿಸಿರುವುದಾಗಿ ತಿಳಿಸಿದ್ದಾರೆ.

ಕಿರಣ್ ಹಾಗೂ ಇತರರು ಹಿಮ್ಸ್ ಆಸ್ಪತ್ರೆಗೆ ಬಂದು ನೋಡಿದಾಗ ಸತೀಶ್ ಮೃತಪಟ್ಟು, ಮೃತದೇಹ ಶವಾಗಾರದಲ್ಲಿತ್ತು. ದೇಹ ನೋಡಿದಾಗ ತಲೆ ಹಾಗೂ ದೇಹದ ಕೆಲವು ಭಾಗಗಳಲ್ಲಿ ರಕ್ತಸ್ರಾವ ಆಗಿತ್ತು. ಹೀಗಾಗಿ ಅಣ್ಣ ಸತೀಶ್ ಅವರನ್ನು ಯಾರೋ ಕೊಲೆ ಮಾಡಿದ್ದಾರೆ ಎಂದು ಕಿರಣ್‌ಕುಮಾರ್ ನೀಡಿದ ದೂರಿನ ಮೇರೆಗೆ ಬಡಾವಣೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

## ಭೀಕರ ಅಪಘಾತದಲ್ಲಿ ಜಿಲ್ಲೆಯ ಮೂವರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಿರುಪತಿ ಬಳಿ ಮಂಗಳವಾರ ಸಂಭವಿಸಿದ ಕಂಟೈನರ್ ಹಾಗೂ ಕಾರು ನಡುವಿನ ಅಪಘಾತದಲ್ಲಿ ಜಿಲ್ಲೆಯ ಮೂವರು ಸೇರಿ ಐದು ಜನರು ಮೃತಪಟ್ಟಿದ್ದಾರೆ.

ತಾಲ್ಲೂಕಿನ ಹಿರೀಸಾವೆ ಹೋಬಳಿ ಸಬ್ಬನಹಳ್ಳಿ ಗ್ರಾಮದ ಗೀತಮ್ಮ ಅವರ ಪುತ್ರ ರಜನಿಕುಮಾರ್ (36), ಸೊಸೆ ಸಹನಾ (32), ಮೊಮ್ಮಗ ಲೇಖನ್ (13), ಸಹನಾ ತಾಯಿ ವಿಜಯಮ್ಮ ಹಾಗೂ ಕಾರು ಚಾಲಕ ಮೃತಪಟ್ಟಿದಾರೆ. ರಜನಿಕುಮಾರ್ ಅವರ ತಾಯಿ ಗೀತಮ್ಮ ಹಾಗೂ ಕಾರು ಚಾಲಕನ ಪುತ್ರ ಯಾವುದೇ ಅಪಾಯವಿಲ್ಲದೆ ಪಾರಾಗಿದ್ದಾರೆ.

ಬೆಂಗಳೂರಿನಿಂದ ಸ್ನೇಹಿತನ ಕಾರಿನಲ್ಲಿ ರಜನಿಕುಮಾರ್ ಕುಟುಂಬ ಸದಸ್ಯರೊಂದಿಗೆ ತಿರುಪತಿಗೆ ತೆರಳಿದ್ದರು. ದೇವರ ದರ್ಶನ ಮುಗಿಸಿಕೊಂಡು ವಾಪಾಸ್ ಬರುತ್ತಿದ್ದಾಗ ಘಟನೆ ನಡೆದಿದೆ. ಮುಂದೆ



ಚಲಿಸುತ್ತಿದ್ದ ಕಂಟೈನರ್‌ಗೆ ಹಿಂದಿನಿಂದ ಬಂದ ಕಾರು ಡಿಕ್ಕಿಯಾಗಿ ಅವಘಡ ಸಂಭವಿಸಿದೆ ಎಂದು ತಿಳಿದುಬಂದಿದೆ. ಬುಧವಾರ ಹುಟ್ಟೂರಿನಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಸಹನಾ ಅವರ ತಾಯಿ ತುರುವೇಕೆರೆ ತಾಲ್ಲೂಕು ಗೋಣಿತುಮಕೂರು ಗ್ರಾಮದವರು. ರಜನಿಕುಮಾರ್ ಕಳೆದ 15 ವರ್ಷಗಳಿಂದ ಬೆಂಗಳೂರಿನಲ್ಲೇ ವಾಸವಿದ್ದು ಆಗಾಗ ಹುಟ್ಟೂರಿಗೆ ಬಂದು ಹೋಗುತ್ತಿದ್ದರು. ತಾಯಿ ಗೀತಮ್ಮ, ಅತ್ತೆ ವಿಜಯಕುಮಾರಿ ಅವರೊಟ್ಟಿಗೆ ಸ್ನೇಹಿತನ ಕಾರಿನಲ್ಲಿ ತಿರುಪತಿಗೆ ತೆರಳಿದ್ದರು. ವಾಪಾಸ್ ಬರುವಾಗ ದುರ್ಘಟನೆ ಸಂಭವಿಸಿದೆ.

## ಬೇಡಿಕೆ ಈಡೇರಿಕೆಗಾಗಿ ಪೌರ ಕಾರ್ಮಿಕರ ಚಳವಳಿ



ಹಾಸನ: ಪೌರ ಕಾರ್ಮಿಕರು, ನೌಕರರ ನ್ಯಾಯ ಸಮ್ಮತ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ರಾಜ್ಯ ಪೌರ ನೌಕರರ ಸಂಘದಿಂದ ಮಂಗಳವಾರ ನಗರದಲ್ಲಿ ತಮಟೆ ಚಳವಳಿ ನಡೆಸಲಾಯಿತು.

ಹೇಮಾವತಿ ಪ್ರತಿಮೆಯಿಂದ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ರಾಜ್ಯ ಪೌರ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲೋಕೇಶ್ ಮಾತಾಡಿ, ರಾಜ್ಯ ನಗರ ಸ್ಥಳೀಯ ಸಂಸ್ಥೆಯ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ಕೆ ಜಿ ಐ ಡಿ, ಜ್ಯೋತಿ ಸಂಜೀವಿನಿ, ಸೇರಿದಂತೆ ಸರ್ಕಾರಿ ನೌಕರರು ಪಡೆಯುವ ಎಲ್ಲಾ ಸೌಲಭ್ಯಗಳನ್ನು ನಮಗೂ ವಿಸ್ತರಿಸಬೇಕು ಎಂದರು.

ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು ಸಹಾಯಕರು, ವಾಹನ ಚಾಲಕರು, ಒಳಚರಂಡಿ ವಿಭಾಗದ ನೌಕರರು, ಬೀದಿ ದೀಪ ಸಹಾಯಕರು,ಲೋಡರ್ಸ್, ಪಾರ್ಕ್ 9 ಗಾರ್ಡನರ್, ಸ್ಯಾನಿಟರಿ ಸೂಪರ್ ವೈಸರ್, ಡಾಟಾ ಎಂಟ್ರಿ ಆಪರೇಟರ್ಸ್, ವಾಹನ ಸಹಾಯಕರನ್ನು ನೇರ ಪಾವತಿ ಯೋಜನೆಯಡಿ ತರಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಪೌರ ನೌಕರರ ಶಾಖಾ ಸಂಘದ ಅಧ್ಯಕ್ಷ ವೆಂಕಟೇಶ್, ಉಪಾಧ್ಯಕ್ಷ ರಮೇಶ್, ಸಂಘಟನಾ ಕಾರ್ಯದರ್ಶಿ ಪರಶುರಾಮು ಹಾಗೂ ಸದಸ್ಯರು ಇದ್ದರು.

